ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತೆರಡನೆಯ ಅಧಿವೇಶನ
ಸೋಮವಾರ, ದಿನಾಂಕ : 07 ನೇ ಡಿಸೆಂಬರ್, 2020

ವಿಶ್ವ ವಿದ್ಯಾಲಯಗಳಲ್ಲಿ ಖಾಲಿಯಿರುವ ಹುದ್ದೆಗಳ ಕುರಿತು

ಶ್ರೀ ಅರುಣ ಶಹಾಪುರ(ಶಿಕ್ಷಕರ ಕ್ಷೇತ್ರ) -

04 (03) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಜ್ಯದಲ್ಲಿರುವ ಒಟ್ಟು ಇರುವ ವಿಶ್ವ ವಿದ್ಯಾಲಯಗಳ ಸಂಖ್ಯೆ ಎಷ್ಟು ಹಾಗೂ ಯಾವುವು; (ವಿವರ ನೀಡುವುದು)

(ಆ) ಈ ಎಲ್ಲ ವಿಶ್ವ ವಿದ್ಯಾಲಯಗಳಲ್ಲಿ ಕುಲಪತಿಗಳ ಹಾಗೂ ಕುಲಸಚಿವರ ಹುದ್ದೆಗಳನ್ನು ಭರ್ತಿ ಮಾಡಲಾಗಿದೆಯೇ; ಮಾಡಿದ್ದಲ್ಲಿ, (ಎಲ್ಲ ವಿಶ್ವ ವಿದ್ಯಾಲಯಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕುಲಪತಿಗಳ ಹಾಗೂ ಕುಲಸಚಿವರುಗಳ ಪಟ್ಟಿಯನ್ನು ನೀಡುವುದು)

(ಇ) ಈ ಎಲ್ಲ ವಿಶ್ವ ವಿದ್ಯಾಲಯಗಳಲ್ಲಿ ಖಾಲಿ ಇರುವ ಬೋಧಕ ಬೋಧಕೇತರರ ಹುದ್ದೆಗಳ ಸಂಖ್ಯೆ ಎಷ್ಟು; (ಹುದ್ದೆವಾರು ಮಾಹಿತಿ ನೀಡುವುದು)

(ಈ) ಹುದ್ದೆಗಳ ಭರ್ತಿಗೆ ಕ್ರಮ ಕೈಗೊಳ್ಳಲಾಗಿದೆಯೇ; ಕ್ರಮಕೈಗೊಂಡಿದ್ದಲ್ಲಿ ವಿ.ವಿ. ವಾರು ಸಂಪೂರ್ಣ ವಿವರವನ್ನು ಒದಗಿಸುವುದು; ಪ್ರಕ್ರಿಯೆಯು ಯಾವ ಹಂತದಲ್ಲಿದೆ; ಪ್ರತಿಯೊಂದು ವಿ.ವಿ.ಯ ವಿವರವನ್ನು ಸಂಪೂರ್ಣವಾಗಿ ಒದಗಿಸುವುದು?